ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

(28)

ಇಲಾಖೆ / ವಿಷಯ : DEPARTMENT / SUBJECT: ಗೃಹ - ಸಿಡಿ ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE 9/3/21

# ಸಿ.ಡಿ. ಕೇಸ್ ದೂರು ಹಿಂಪಡೆಯಲು ದಿನೇಶ್ ಮೀನಮೇಷ

## ವಕೀಲರ ಜತೆ ಚರ್ಚಿಸಿ ಮುಂದಿನ ನಡೆ | ದೂರು ವಾಪಸ್ ಪಡೆವ ಬಗ್ಗೆ ವಕೀಲರು ಇನ್ನೂ ಸಲಹೆ ಕೊಟ್ಟಿಲ್ಲ: ಕಲ್ಲಹಳ್ಳಿ

• ಕನ್ನಡಪ್ರಭ ವಾರ್ತೆ ರಾಮನಗರ 9/3/21

ರಾಜ್ಯ ರಾಜಕೀಯ ವಲಯದಲ್ಲಿ ಬಿರುಗಾಳಿ ಎಬ್ಬಿಸಿದ್ದ ಸಿ.ಡಿ. ಪ್ರಕರಣದ ದೂರನ್ನು ಹಿಂಪಡೆಯಲು ನಿರ್ಧರಿಸುವುದಾಗಿ ಭಾನುವಾರವಷ್ಟೇ ಬೆಂಗಳೂರಿನಲ್ಲಿ ತಿಳಿಸಿದ್ದ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ, ಇದೀಗ ವಕೀಲರೊಂದಿಗೆ ಚರ್ಚೆ ನಡೆಸಿದ ಬಳಿಕವಷ್ಟೇ ಹಿಂಪಡೆಯುವುದಾಗಿ ಹೇಳಿದ್ದಾರೆ.



ತಮ್ಮ ವಕೀಲರ ಮೂಲಕ ದೂರು ಹಿಂಪಡೆವ ಬಗ್ಗೆ ಕಬ್ಬನ್ ಪಾರ್ಕ್ ಪೊಲೀಸರಿಗೆ ಪತ್ರ ಕಳುಹಿಸಿದ್ದ ದಿನೇಶ್ ಕಲ್ಲಹಳ್ಳಿ ಮತ್ತೆ ಉಲ್ಟಾ ಹೊಡೆದಿದ್ದು ಗೊಂದಲದ ಹೇಳಿಕೆಗಳನ್ನು ನೀಡಿದ್ದಾರೆ. ನಗರದಲ್ಲಿ ಸೋಮವಾರ ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ನನಗೆ ವಕೀಲರು ಅಧಿಕೃತವಾಗಿ ಈವರೆಗೂ ಏನೂ ಹೇಳಿಲ್ಲ ಎಂದರು.

ನೀವು ಕೇಸು ಹಿಂದಕ್ಕೆ ಪಡೆಯುತ್ತೀರೋ ಇಲ್ಲವೋ ಎಂಬ ಪ್ರಶ್ನೆಗೆ, ನಾನು ವಕೀಲರ ಜೊತೆ ಕಾನೂನು ಸಮಾಲೋಚನೆ ನಡೆಸಬೇಕಾಗಿದೆ. ಅವರು ನೀಡುವ ಮಾರ್ಗದರ್ಶನದಂತೆ ನಡೆದುಕೊಳ್ಳುತ್ತೇನೆ. ದೂರು ಹಿಂಪಡೆಯುವ ಬಗ್ಗೆ ನನ್ನ ವಕೀಲರು ಯಾವ ಸಲಹೆಗಳನ್ನು ನೀಡಿಲ್ಲ ಎಂದರು.

## ನನ್ನ ಬಳಿ ಯಾವುದೇ ಸೀಡಿ ಇಲ್ಲ: ರಾಜಶೇಖರ ಮುಲಾಲಿ

ಬೆಳಗಾವಿ: ನನ್ನ ಬಳಿ ರಾಜಕಾರಣಿಗಳ ಸೀಡಿ ಇದೆ ಎಂದು ಎಲ್ಲೂ ಹೇಳಿಲ್ಲ. ನನ್ನ ಬಳಿ ಯಾವುದೇ ಸೀಡಿಗಳಿಲ್ಲ ಎಂದು ಸಾಮಾಜಿಕ ಕಾರ್ಯಕರ್ತ ರಾಜಶೇಖರ ಮುಲಾಲಿ ಪುನರುಚ್ಚರಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ಬಿಜೆಪಿ ಸರ್ಕಾರ ರಚನೆಯಲ್ಲಿ ಮಾಜಿ ಸಚಿವರ ಪಾತ್ರ ಪ್ರಮುಖವಾದದ್ದು. ಹೀಗಾಗಿ ಉ.ಕರ್ನಾಟಕದ ರಾಜಕಾರಣಿಗಳು ಬೆಳೆಯದಂತೆ ಷಡ್ಯಂತ್ರ ನಡೆಸಲಾಗಿದೆ ಎಂದು ಆರೋಪಿಸಿದರು.